**National**
**Kannada**
**18.08.2024 01.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಪೌರತ್ವ ತಿದ್ದುಪಡಿ ಕಾಯ್ದೆಯಡಿ ಗುಜರಾತ್‌ನ ಅಹಮದಾಬಾದ್‌ನಲ್ಲಿಂದು 188 ವಲಸಿಗರಿಗೆ ಪೌರತ್ವ ಪ್ರಮಾಣಪತ್ರ ವಿತರಿಸಲಿರುವ ಕೇಂದ್ರ ಸಚಿವ ಅಮಿತ್ ಶಾ
2. ಇಂದು ಕುವೈತ್‌ಗೆ ಅಧಿಕೃತ ಭೇಟಿ ನೀಡಲಿರುವ ವಿದೇಶಾಂಗ ಸಚಿವ ಎಸ್ ಜೈಶಂಕರ್
3. ಸೆಪ್ಟಂಬರ್ 1 ರಿಂದ ಹೊಸ ಸದಸ್ಯತ್ವ ಅಭಿಯಾನ ಆರಂಭಿಸಲಿರುವ ಬಿಜೆಪಿ
4. ಚೀನಾದ ಚೆಂಗ್ಡುವಿನಲ್ಲಿ ಮಂಗಳವಾರದಿಂದ ಕಿರಿಯರ ಬ್ಯಾಡ್ಮಿಂಟನ್ ಟೂರ್ನಿ; ಭಾರತದ 39 ಆಟಗಾರರು ಭಾಗಿ

*****************

ಗುಜರಾತ್‌ನ ಅಹಮದಾಬಾದ್‌ನಲ್ಲಿಂದು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ, ಪೌರತ್ವ ತಿದ್ದುಪಡಿ ಕಾಯ್ದೆ-ಸಿಎಎ, ಅಡಿಯಲ್ಲಿ 188 ಹಿಂದೂ ವಲಸಿಗರಿಗೆ ಪೌರತ್ವ ಪ್ರಮಾಣಪತ್ರ ವಿತರಿಸಲಿದ್ದಾರೆ. ಇಂದು ಬೆಳಗ್ಗೆ ಅಮಿತ್ ಶಾ ಅವರು ಅಹಮದಾಬಾದ್ ಮುನ್ಸಿಪಲ್ ಕಾರ್ಪೊರೇಶನ್‌ನ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದರು.

ಗುಜರಾತ್ ಪ್ರವಾಸದಲ್ಲಿರುವ ಸಚಿವರು ಅಹಮದಾಬಾದ್ ಮುನ್ಸಿಪಲ್ ಕಾರ್ಪೊರೇಷನ್‌ನ 1 ಸಾವಿರ ಕೋಟಿ ರೂಪಾಯಿಗಳ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ.

ಪ್ರಹ್ಲಾದ್ ನಗರದಲ್ಲಿ ನಡೆಯುತ್ತಿರುವ ಸಾರ್ವಜನಿಕ ಸಮಾರಂಭದಲ್ಲಿ ಎಎಂಸಿಯ ಮನೆ-ಮನೆ ತ್ಯಾಜ್ಯ ಸಂಗ್ರಹ ವ್ಯಾನ್‌ಗಳಿಗೆ ಚಾಲನೆ ನೀಡಲಿದ್ದಾರೆ. ಸಂಜೆ ಸಬರಮತಿಯಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

*****************

ವಿದೇಶಾಂಗ ಸಚಿವ ಎಸ್ ಜೈಶಂಕರ್ ಇಂದು ಕುವೈತ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ಡಾ ಜೈಶಂಕರ್, ತಮ್ಮ ಕುವೈತ್ ಸಹವರ್ತಿ ಅಬ್ದುಲ್ಲಾ ಅಲಿ ಅಲ್-ಯಾಹ್ಯಾ ಅವರನ್ನು ಭೇಟಿ ಮಾಡಲಿದ್ದಾರೆ. ಈ ಭೇಟಿಯು, ಎರಡೂ ದೇಶಗಳ ನಡುವಿನ ರಾಜಕೀಯ, ವ್ಯಾಪಾರ, ಹೂಡಿಕೆ, ಇಂಧನ, ಭದ್ರತೆ, ಸಾಂಸ್ಕೃತಿಕ, ದೂತಾವಾಸ ಸೇರಿದಂತೆ ದ್ವಿಪಕ್ಷೀಯ ಸಂಬಂಧಗಳ ವಿವಿಧ ಅಂಶಗಳನ್ನು ಪರಿಶೀಲಿಸಲು ಎರಡೂ ದೇಶಗಳಿಗೆ ಅನುವು ಮಾಡಿಕೊಡುತ್ತದೆ.

ಇದಲ್ಲದೆ, ದ್ವಿಪಕ್ಷೀಯ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಅಂತರಾಷ್ಟ್ರೀಯ ವಿಷಯಗಳು, ಮಧ್ಯಪ್ರಾಚ್ಯ ಮತ್ತು ದಕ್ಷಿಣ ಏಷ್ಯಾದಲ್ಲಿ ಉದ್ಭವಿಸುತ್ತಿರುವ ಭೌಗೋಳಿಕ ರಾಜಕೀಯ ಭೂದೃಶ್ಯವನ್ನು ಸಮರ್ಥವಾಗಿ ಪರಿಹರಿಸುವತ್ತ ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ.

*****************

ಸೆಪ್ಟಂಬರ್ 1 ರಿಂದ ಹೊಸ ಸದಸ್ಯತ್ವ ಅಭಿಯಾನ ಆರಂಭಿಸಲು ಬಿಜೆಪಿ ನಿರ್ಧರಿಸಿದೆ.

ಈ ಕುರಿತು ಮಾಹಿತಿ ನೀಡಿರುವ ಬಿಜೆಪಿ ವಕ್ತಾರ ಸಂಬಿತ್ ಪಾತ್ರ, ವಿಧಾನಸಭೆ ಚುನಾವಣೆ ನಡೆಯುವ ರಾಜ್ಯಗಳನ್ನು ಹೊರತುಪಡಿಸಿ, ಉಳಿದೆಡೆ ಅಭಿಯಾನ ನಡೆಯಲಿದೆ. ನಾಲ್ಕು ವಿಧಾನಗಳ ಮೂಲಕ ಹೊಸ ಸದಸ್ಯರನ್ನು ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳಲಾಗುವುದು ಎಂದು ಹೇಳಿದರು.

ನಿರ್ದಿಷ್ಟ ದೂರವಾಣಿ ಸಂಖ್ಯೆಗೆ ಕರೆ ಮಾಡುವ ಮೂಲಕ ಸದಸ್ಯತ್ವ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಕ್ಯೂಆರ್ ಕೋಡ್, ನಮೋ ಆ್ಯಪ್ ಹಾಗೂ ಬಿಜೆಪಿ ಅಧಿಕೃತ ವೆಬ್‌ಸೈಟ್ ಮೂಲಕವೂ ಸದಸ್ಯತ್ವವನ್ನು ಪಡೆಯಬಹುದಾಗಿದೆ ಎಂದು ತಿಳಿಸಿದರು.

*****************

ದೇಶಾದ್ಯಂತ ಪ್ರತಿಭಟನೆಗೆ ಕಾರಣವಾಗಿರುವ ಕೋಲ್ಕತ್ತಾ ವೈದ್ಯೆಯ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಕೊಲೆ ಪ್ರಕರಣದ ಆರೋಪಿ ಸಂಜಯ್ ರಾಯ್‌ನನ್ನು ಕೇಂದ್ರೀಯ ತನಿಖಾ ದಳ -ಸಿಬಿಐ ಆರೋಪಿಯ ಮಾನಸಿಕ ಸ್ಥಿತಿಗತಿಯ ಬಗ್ಗೆ ಮೌಲ್ಯಮಾಪನ ನಡೆಸಲಿದೆ.

ದೆಹಲಿಯ ಕೇಂದ್ರೀಯ ವಿಧಿವಿಜ್ಞಾನ ಪ್ರಯೋಗಾಲಯದ ಮಾನಸಿಕ ಮತ್ತು ನಡವಳಿಕೆಯ ವಿಶ್ಲೇಷಕರ ತಂಡ, ಅಗತ್ಯ ಪರೀಕ್ಷೆಗಳನ್ನು ನಡೆಸಲು ಕೋಲ್ಕತ್ತಾಕ್ಕೆ ಆಗಮಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸಿಬಿಐ, ಈಗಾಗಲೇ ಆರೋಪಿಯನ್ನು ವಶಕ್ಕೆ ಪಡೆದಿದೆ.

ಇಂದಿನಿಂದ ಏಳು ದಿನಗಳ ಕಾಲ ಕೊಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸುತ್ತಲೂ ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ, 2023 ರ ಸೆಕ್ಷನ್ 163 ಅನ್ನು ವಿಧಿಸಲಾಗಿದೆ. ಈ ಪ್ರದೇಶದಲ್ಲಿ ಐದು ಅಥವಾ ಅದಕ್ಕಿಂತ ಹೆಚ್ಚು ಜನರು ಕಾನೂನುಬಾಹಿರವಾಗಿ ಸೇರುವುದನ್ನು ನಿರ್ಬಂಧಿಸಲಾಗಿದೆ.

ಏತನ್ಮಧ್ಯೆ, ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಮಾಜಿ ಪ್ರಾಂಶುಪಾಲ ಡಾ.ಸಂದೀಪ್ ಘೋಷ್ ಅವರನ್ನು ಸತತ ಎರಡನೇ ದಿನವೂ ಸಿಬಿಐ, ಹಲವಾರು ಗಂಟೆಗಳ ಕಾಲ ವಿಚಾರಣೆ ನಡೆಸಿತು. ಮತ್ತೊಂದು ಸುತ್ತಿನ ವಿಚಾರಣೆಗಾಗಿ ಅವರನ್ನು ಸಿಬಿಐ ಕಚೇರಿಗೆ ಮತ್ತೆ ಕರೆಸಲಾಗಿದೆ ಎಂದು ವರದಿಯಾಗಿದೆ.

*****************

ಕೊಲ್ಕತ್ತಾದ ವೈದ್ಯಕೀಯ ವಿದ್ಯಾರ್ಥಿನಿ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆ ಪ್ರಕರಣದ ಬಗ್ಗೆ ಇಡೀ ದೇಶ ಕಳವಳಗೊಂಡಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರೆಣ್ ರಿಜಿಜು ಹೇಳಿದ್ದಾರೆ.

ಭುವನೇಶ್ವರದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ವೈದ್ಯಕೀಯ ಸಮೂಹದ ರಕ್ಷಣೆಗೆ ಬದ್ಧವಾಗಿದೆ. ಪಶ್ಚಿಮ ಬಂಗಾಳ ಸರ್ಕಾರದ ಬಗ್ಗೆ ಯಾವುದೇ ಆಕ್ರೋಶವಿಲ್ಲ. ಕೇಂದ್ರ ಆರೋಗ್ಯ ಇಲಾಖೆ ಈ ಘಟನೆ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

*****************

ಥೈಲ್ಯಾಂಡ್ ಪ್ರಧಾನಿಯಾಗಿ ಆಯ್ಕೆಯಾಗಿರುವ ಪೇಟೊಂಗ್ಟಾರ್ನ್ ಶಿನವತ್ರಾ ಅವರನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಅವರು, ಪೇಟೊಂಗ್ಟಾರ್ನ್ ಶಿನವತ್ರಾ ಅವರ ಅಧಿಕಾರವಧಿ ಯಶಸ್ವಿಯಾಗಿರಲಿ ಎಂದು ಹಾರೈಸಿದ್ದಾರೆ. ಭಾರತ ಮತ್ತು ಥೈಲ್ಯಾಂಡ್ ನಡುವಿನ ದ್ವಿಪಕ್ಷೀಯ ಬಾಂಧವ್ಯವನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ಅವರೊಂದಿಗೆ ಕೆಲಸ ಮಾಡಲು ಎದುರು ನೋಡುತ್ತಿರುವುದಾಗಿ ಹೇಳಿದ್ದಾರೆ.

*****************

ಗಾಂಬಿಯಾದ ಉಪಾಧ್ಯಕ್ಷ ಮುಹಮ್ಮದ್ ಬಿ.ಎಸ್ ಜಾಲೊ ಅವರು, ದೆಹಲಿಗೆ ಆಗಮಿಸಿದ್ದಾರೆ. ದೆಹಲಿಯಲ್ಲಿ ನಡೆಯಲಿರುವ ಭಾರತ–ಆಫ್ರಿಕಾ ಸಿಐಐ ವ್ಯಾಪಾರ ಸಮ್ಮೇಳದಲ್ಲಿ ಪಾಲ್ಗೊಳ್ಳಲು ಅವರು ಆಗಮಿಸಿದ್ದಾರೆ.

*****************

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್ ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅನುಮತಿ ನೀಡಿರುವುದನ್ನು ರಾಜ್ಯ ಸಚಿವ ಸಂಪುಟ ಸಭೆ ಟೀಕಿಸಿದೆ. ರಾಜ್ಯಪಾಲರ ನಡೆ ರಾಜಕೀಯ ಪ್ರೇರಿತ ಎಂದು ಟೀಕಿಸಿದೆ.

ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ತಮ್ಮ ವಿರುದ್ಧ ತನಿಖೆ ನಡೆದಿಲ್ಲ. ತನಿಖೆಯಲ್ಲಿ ತಮ್ಮ ಪಾತ್ರದ ಬಗ್ಗೆ ಉಲ್ಲೇಖವಿಲ್ಲ. ತಮ್ಮ ಸರ್ಕಾರದ ಅವಧಿಯಲ್ಲಿ ನಡೆದ ಹಗರಣ ಇದಲ್ಲ. ಹೀಗಿರುವಾಗ ತಾವು ರಾಜೀನಾಮೆ ನೀಡುವ ಅಗತ್ಯವಿಲ್ಲ. .ರಾಜ್ಯಪಾಲರ ವಿರುದ್ಧ ಕಾನೂನು ಹೋರಾಟ ನಡೆಸಲು ಸಚಿವ ಸಂಪುಟ ಸಭೆ ನಿರ್ಣಯಿಸಿದೆ ಎಂದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ಕೊಟ್ಟಿರುವುದು ಸರಿಯಲ್ಲ. ಪಕ್ಷ, ಇಡೀ ಸಂಪುಟ ಮುಖ್ಯಮಂತ್ರಿಗಳ ಪರವಾಗಿ ನಿಂತು ನ್ಯಾಯಕ್ಕಾಗಿ ಹೋರಾಡುತ್ತೇವೆ ಎಂದರು.

*****************

ಬರುವ 2030 ರ ವೇಳೆಗೆ ಕಾಲು ಮತ್ತು ಬಾಯಿ ರೋಗ ಮುಕ್ತಗೊಳಿಸುವ ಗುರಿ ಸಾಧನೆ ಹಿನ್ನೆಲೆಯಲ್ಲಿ ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್, ಇಲಾಖೆ ಕೈಗೊಂಡ ಕ್ರಮಗಳನ್ನು ನಿನ್ನೆ ಪರಿಶೀಲಿಸಿದರು.

ಜಾನುವಾರು ವಲಯವು ಭಾರತದ ಆರ್ಥಿಕತೆಗೆ ಮಾತ್ರವಲ್ಲದೆ ರೈತರ ಜೀವನೋಪಾಯಕ್ಕೂ ನಿರ್ಣಾಯಕವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಸಭೆಯಲ್ಲಿ, 2030 ರ ವೇಳೆಗೆ ಭಾರತವನ್ನು ಕಾಲುಬಾಯಿ ರೋಗ ಮುಕ್ತಗೊಳಿಸುವ ಕ್ರಿಯಾ ಯೋಜನೆಯ ಕುರಿತು ಚರ್ಚಿಸಲಾಯಿತು. ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಉತ್ತರಾಖಂಡ, ಪಂಜಾಬ್, ಹರಿಯಾಣ, ಮಹಾರಾಷ್ಟ್ರ ಮತ್ತು ಗುಜರಾತ್ ಸೇರಿದಂತೆ ರಾಜ್ಯಗಳಲ್ಲಿ ಕಾಲು ಮತ್ತು ಬಾಯಿ ರೋಗ ಮುಕ್ತ ವಲಯಗಳನ್ನು ರಚಿಸಲು ಮೌಲ್ಯಮಾಪನ ನಡೆಸಲಾಗಿದೆ.

ಪ್ರಾಣಿಗಳ ರೋಗಗಳು, ಅದರಲ್ಲೂ ಕಾಲು ಮತ್ತು ಬಾಯಿ ರೋಗ ಜಾನುವಾರು ವಲಯದ ಬೆಳವಣಿಗೆಗೆ ಗಮನಾರ್ಹ ತಡೆಗೋಡೆಯಾಗಿದೆ. ಇದು ವರ್ಷಕ್ಕೆ ಅಂದಾಜು 24 ಸಾವಿರ ಕೋಟಿ ರೂಪಾಯಿಗಳ ಆರ್ಥಿಕ ನಷ್ಟವನ್ನು ಉಂಟುಮಾಡುತ್ತದೆ.

ಈ ರೋಗವನ್ನು ನಿಯಂತ್ರಿಸುವುದು ಮತ್ತು ನಿರ್ಮೂಲನೆ ಮಾಡುವುದರಿಂದ ಹಾಲು ಉತ್ಪಾದನೆಯನ್ನು ಹೆಚ್ಚಿಸುವುದಲ್ಲದೆ, ರೈತರ ಆದಾಯವನ್ನು ವೃದ್ಧಿಸಿ, ಅವರ ಜೀವನೋಪಾಯವನ್ನು ಅಭಿವೃದ್ಧಿ ಪಡಿಸುತ್ತದೆ ಎಂದು ರಂಜನ್ ಸಿಂಗ್ ಹೇಳಿದರು.

*****************

ಚೀನಾದ ಚೆಂಗ್ಡುವಿನಲ್ಲಿ ಇದೇ ಮಂಗಳವಾರದಿಂದ ಆರಂಭವಾಗಲಿರುವ ಕಿರಿಯರ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ 39 ಆಟಗಾರರು ಪಾಲ್ಗೊಳ್ಳುತ್ತಿದ್ದಾರೆ.

ಬರುವ 2025 ವಿಶ್ವ ಜೂನಿಯರ್ ಬ್ಯಾಡ್ಮಿಂಟನ್ ಟೂರ್ನಿಗೆ ಬಲಿಷ್ಠ ಭಾರತ ತಂಡವನ್ನು ಕಟ್ಟಲು ಈ ಪಂದ್ಯಾವಳಿ ಅತ್ಯಂತ ಮಹತ್ವ ಪಡೆದುಕೊಂಡಿದೆ. 15 ಹಾಗೂ 17 ವರ್ಷದೊಳಗಿನ ವಿಭಾಗಗಳಲ್ಲಿ ಭಾರತ ತಂಡ ಭಾಗವಹಿಸುತ್ತಿದೆ. ಆಟಗಾರರು ಗುವಾಹತಿಯಲ್ಲಿರುವ ತರಬೇತಿ ಕೇಂದ್ರದಲ್ಲಿ ತಾಲೀಮು ನಡೆಸಿದ್ದರು.

15 ವರ್ಷದೊಳಗಿನ ತಂಡ ನಾಯಕತ್ವ ಬಿಂಡಿಗನವಿಲ್ಲೆ ಹಾಗೂ ತನ್ವಿಪತ್ರಿ ಅವರು ವಹಿಸಿದ್ದು, 17 ವರ್ಷದೊಳಗಿನ ತಂಡವನ್ನು ಗಾಮದತ್ತಿ ಮತ್ತು ತನ್ವಿರೆಡ್ಡಿಯವರು ಮುನ್ನೆಡೆಸುತ್ತಿದ್ದಾರೆ.

*****************

ಅಮೆರಿಕಾದ ಸಿನ್ಸಿನಾಟಿ ಓಪನ್ ಟೆನಿಸ್ –2024 ರ ಸೆಮಿ–ಫೈನಲ್ಸ್‌ನಲ್ಲಿ ಮಹಿಳಾ ಮತ್ತು ಪುರುಷರ ವಿಶ್ವದ ಅಗ್ರ ಶ್ರೇಯಾಂಕಿತ ಆಟಗಾರರಾದ ಇಗಾ ಸ್ವಿಯಾಟೆಕ್ ಮತ್ತು ಜಾನಿಕ್ ಸಿನ್ನರ್ ಇಂದು ತಮ್ಮ ಹೋರಾಟ ಮುಂದುವರಿಸಲಿದ್ದಾರೆ.

ಪೋಲಿಷ್ ಆಟಗಾರ್ತಿ ಸ್ವಿಯಾಟೆಕ್ ತನ್ನ ಬೆಲರೂಸ್‌ನ ಎದುರಾಳಿ ಅರೀನಾ ಸಬಲೆಂಕಾ ವಿರುದ್ಧ ಸೆಣಸಿದರೆ, ಇಟಲಿಯ ಸಿನ್ನರ್ ಅವರು, ಜರ್ಮನಿಯ ಅಲೆಕ್ಸಾಂಡರ್ ಜ್ವೆರೆವ್ ವಿರುದ್ಧ ಆಡಲಿದ್ದಾರೆ.

ನಿನ್ನೆ, ಸ್ವಿಯಾಟೆಕ್ ಅವರು ಮಿರ್ರಾ ಆಂಡ್ರೀವಾ ಅವರನ್ನು 4–6, 6–3, 7–5 ಮತ್ತು ಸಿನ್ನರ್ 4–6, 7–5, 6–4 ರಿಂದ ಆಂಡ್ರೆ ರುಬ್ಲೆವ್ ವಿರುದ್ಧ ಜಯ ಸಾಧಿಸಿ ಉಪಾಂತ್ಯ ಪ್ರವೇಶಿಸಿದರು.

*****************

ಮಲೇಷ್ಯಾದಲ್ಲಿ ಮುಂದಿನ ವರ್ಷ ನಡೆಯಲಿರುವ ಮಹಿಳೆಯರ 19 ವರ್ಷದೊಳಗಿನವರ ಟಿ–20 ವಿಶ್ವಕಪ್ ಕ್ರಿಕೆಟ್ ಪಂದ್ಯಗಳ ವೇಳಾಪಟ್ಟಿಯನ್ನು ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ ಇಂದು ಪ್ರಕಟಿಸಿದೆ. ಹಾಲಿ ಚಾಂಪಿಯನ್ ಭಾರತ, ಜನವರಿ 19 ರಂದು ವೆಸ್ಟ್ ಇಂಡೀಸ್ ವಿರುದ್ಧ ತನ್ನ ಅಭಿಯಾನವನ್ನು ಆರಂಭಿಸಲಿದೆ.

ಹದಿನಾರು ತಂಡಗಳು ಭಾಗವಹಿಸಲಿರುವ ಪಂದ್ಯಾವಳಿಯು, ಬರುವ ಜನವರಿ 18 ರಿಂದ ಫೆಬ್ರವರಿ 2ರವರೆಗೆ ನಡೆಯಲಿದೆ.

*****************

ದೇಶದ ಹಲವೆಡೆ ಮಳೆ ಮುಂದುವರಿದಿದ್ದು, ಹವಮಾನ ಇಲಾಖೆ ಪೂರ್ವ ಭಾರತದಲ್ಲಿ ಭಾರಿ ಮಳೆಯ ಮುನ್ಸೂಚನೆ ನೀಡಿದೆ. ಮುಂದಿನ 2–3 ದಿನಗಳ ಕಾಲ ದೇಶದ ಪೂರ್ವ ಭಾಗದಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಪಶ್ಚಿಮ ಬಂಗಾಳ, ಒಡಿಶಾ, ಜಾರ್ಖಂಡ್, ಬಿಹಾರ, ಉಪ–ಹಿಮಾಲಯ ಪಶ್ಚಿಮ ಬಂಗಾಳ, ಸಿಕ್ಕಿಂ, ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ ಮತ್ತು ತ್ರಿಪುರಾದಲ್ಲಿ ಈ ತಿಂಗಳ 20 ರವರೆಗೆ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ಹೇಳಿದೆ.

ಮುಂದಿನ ಎರಡು ದಿನಗಳಲ್ಲಿ ಕೇರಳ, ತಮಿಳುನಾಡು ಮತ್ತು ಲಕ್ಷದ್ವೀಪದಲ್ಲಿ ಭಾರೀ ಮಳೆಯಾಗಲಿದೆ. ಕರ್ನಾಟಕದಲ್ಲೂ ಮುಂದಿನ 7 ದಿನ ಮಳೆ ನಿರೀಕ್ಷೆಯಿದೆ ಹವಾಮಾನ ಇಲಾಖೆ ತಿಳಿಸಿದೆ.

*********ಮುಕ್ತಾಯ********